ಬೇಲೂರು ಪ್ರಥಮ ದರ್ಜೆ ಕಾಲೇಜಿನಲ್ಲಿ ಉಪನ್ಯಾಸಕರ ಕೊರತೆ

1556 (1971) ಶ್ರೀ ಶ್ರೀ ಎಸ್.ಹೆಚ್. ಪುಟ್ಟರಂಗನಾಥ (ಬೇಲೂರು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೇಲೂರು ಪ್ರಥಮ ದರ್ಜೆ ಕಾಲೇಜಿನಲ್ಲಿ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಕೊರತೆ ನೀಗಲು ಕೈಗೊಂಡ ಕ್ರಮಗಳೇನು?

ಡಾ॥ ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) ಬಂದಿದೆ

ಆ) ಅರೆಕಾಲಿಕ ಉಪನ್ಯಾಸಕರ ಮೂಲಕ ಕೊರತೆ ನೀಗಿಸಲು ಕ್ರಮ ಕೈಗೊಳ್ಳಲಾಗಿದೆ

ಬೇಲೂರು ಸಾರ್ವಜನಿಕ ಆಸ್ಪತ್ರೆಯಲ್ಲಿ ಮಹಿಳಾ ವೈದ್ಯರು ಮತ್ತು ವೈದ್ಯರ ಕೊರತೆ

1557 (1972) ಶ್ರೀ ಎಸ್.ಹೆಚ್. ಪುಟ್ಟರಂಗನಾಥ (ಬೇಲೂರು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೇಲೂರು ಸಾರ್ವಜನಿಕ ಆಸ್ಪತ್ರೆಗಳಲ್ಲಿ ಮಹಿಳಾ ವೈದ್ಯರು ಮತ್ತು ಇತರೆ ವೈದ್ಯರಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು?

ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ

ಆ) ಸ್ನಾತಕೋತ್ತರ ವ್ಯಾಸಂಗವನ್ನು ಪೂರೈಸಿಬಂದ ವೈದ್ಯರನ್ನು ನೇಮಕ ಮಾಡುವ ಮೂಲಕ ಹಾಗೂ ಸಾಮಾನ್ಯ ವರ್ಗಾವಣೆ ಸಮಯದಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಬೆಳ್ತಂಗಡಿ ಕ್ಷೇತ್ರದ ಗೇರುಕಟ್ಟೆ ಪ್ರೌಢಶಾಲೆಯಲ್ಲಿನ ಸಿಬ್ಬಂದಿ ಕೊರತೆ

1558 (1778) ಶ್ರೀ ಕೆ. ಪ್ರಭಾಕರ ಬಂಗೇರ (ಬೆಳ್ತಂಗಡಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ಕ್ಷೇತ್ರದ ಗೇರುಕಟ್ಟೆ ಪ್ರೌಢಶಾಲೆಯಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು? ಹಾಗೂ ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು?

ಆ) ಗ್ರಾಮಾಂತರ ಪ್ರದೇಶದ ಶಾಲೆಯಲ್ಲಿ ಸಿಬ್ಬಂದಿ ಕೊರತೆಯಿಂದಾಗಿ ವಿದ್ಯಾರ್ಥಿಗಳಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಶೀಘ್ರಗತಿಯಲ್ಲಿ ತುಂಬುವ ಬಗ್ಗೆ ಕ್ರಮ ಜರುಗಿಸುವರೇ?

ಇ) ಹಾಗಿದ್ದಲ್ಲಿ ಕೊರತೆ ಇರುವ ಸಿಬ್ಬಂದಿಯನ್ನು ತುಂಬಲು ಸರ್ಕಾರವು ತೆಗೆದುಕೊಂಡ ಕ್ರಮವೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಮಂಜೂರಾದ ಹುದ್ದೆಗಳು - 10, ಖಾಲಿರುವ ಹುದ್ದೆಗಳು -01

ಆ) ಹೌದು

ಇ) ಖಾಲಿ ಇರುವ ಹುದ್ದೆಯನ್ನು ಭರ್ತಿ ಮಾಡಲು ಕ್ರಮ ಕೈಗಯಳ್ಳಲಾಗಿದೆ.

ಪ್ರೌಢಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣ ನೀಡಿಕೆ

1559 (1779) ಶ್ರೀ ಕೆ. ಪ್ರಭಾಕರ ಬಂಗೇರ (ಬೆಳ್ತಂಗಡಿ) : ಮಾನ್ಯ ಪ್ರಾರ್ಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ರಾಜ್ಯದ ಪ್ರೌಢಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣ ನೀಡುವ ಪ್ರಸ್ತಾವನೆಯು ಸರಕಾರದ ಮುಂದಿದೆಯೆ;

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಕಂಪ್ಯೂಟರ್ ಶಿಕ್ಷಣ ಸೌಲಭ್ಯವನ್ನು ಎಲ್ಲಾ ಪ್ರೌಢಶಾಲೆಗಳಿಗೂ ಒದಗಿಸಿಕೊಟ್ಟು ಆಧುನಿಕ ಶಿಕ್ಷಣ ಕ್ರಮವನ್ನು ವಿದ್ಯಾರ್ಥಿಗಳಿಗೆ ಒದಗಿಸಿಕೊಡಲಾಗುವುದೇ;

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು):

ಅ) ಇದೆ

ಆ) ರಾಜ್ಯದ 25 ಜಿಲ್ಲೆಗಳಲ್ಲಿ ಒಟ್ಟು 294 ಪ್ರೌಢಶಾಲೆಗಳಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನದಲ್ಲಿ ಕಂಪ್ಯೂಟರ್ ಶಿಕ್ಷಣ "ಕ್ಲಾಸ್ ಯೋಜನೆ "ಯನ್ನು ಅನುಷ್ಠಾನಗೊಳಿಸಲಾಗಿದೆ. 2000-2001ನೇ ಸಾಲಿನಲ್ಲಿ ಈ ಯೋಜನೆಯನ್ನು ಇನ್ನೂ ಹೆಚ್ಚಿನ 1000 ಶಾಲೆಗಳಿಗೆ ವಿಸ್ತರಿಸಲು ಆಲೋಚಿಸಲಾಗಿದೆ. ಹಾಗೆಯೇ ಪ್ರಧಾನಮಂತ್ರಿಗಳ ಐ. ಟಿ. ಟಾಸ್ಕ್‌ಫೋಸ್ ಕಾರ್ಯಕ್ರಮದನ್ವಯ ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಯ ಪ್ರೌಢಶಾಲೆಗಳಿಗೆ ಪ್ರತ್ಯೇಕ ಕಂಪ್ಯೂಟರ್ ಶಿಕ್ಷಣ ಕಾರ್ಯಕ್ರಮವನ್ನು ಕೇಂದ್ರ ಯೋಜನೆಯಾಗಿ ಜಾರಿಗೊಳಿಸಲು ಯೋಚಿಸಲಾಗಿದೆ.

ಇ) ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗುವುದು

ರಾಜ್ಯದಲ್ಲಿ ತಾಂತ್ರಿಕ ಶಿಕ್ಷಣಾಲಯಗಳಿಗೆ ಸ್ವಾಯತ್ತತೆ

1560 (1780) ಶ್ರೀ ಕೆ. ಪ್ರಭಾಕರ ಬಂಗೇರ (ಬೆಳ್ತಂಗಡಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಪಾಲಿಟೆಕ್ನಿಕ್‌ಗಳಿಗೆ ಸ್ವಾಯುತ್ತತೆ ನೀಡಲಾಗಿದೆ? ಎಂದಿನಿಂದ ನೀಡಲಾಗಿದೆ?